ತರೀಕೆರೆ ತಾಲ್ಲೂಕು ಕೆಮ್ಮಣ್ಣಗುಂಡಿ ಗ್ರಾಮದಲ್ಲಿ ಆರಕ್ಷಕ ಉಪಠಾಣೆ ಸ್ಥಾಪನೆ.

1676(2010)

ಶ್ರೀ ಕೆ.ಬಿ.ಮಲ್ಲಿಕಾರ್ಜುನ(ಬೀರೂರು): ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಮಗಳೂರು ಜಿಲ್ಲೆ ತರೀಕೆರೆ ತಾಲ್ಲೂಕು, ಕೆಮ್ಮಣ್ಣುಗುಂಡಿ ಗ್ರಾಮದಲ್ಲಿ ಆರಕ್ಷಕ ಉಪ ಠಾಣೆಯನ್ನು ಮಂಜೂರಾತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ ಎಂದಿನಿಂದ ಮಂಜುರಾತಿ ನೀಡಿ ಆರಕ್ಷಕ ಉಪ ಠಾಣೆಯನ್ನು ಸ್ಥಾಪಿಸಲಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಕಡೂರು ತಾಲ್ಲೂಕು ಸಕ್ರೆಪಟ್ಟಣ, ನಾಗೇನಹಳ್ಳಿ ಹಾಗೂ ನಿಡಘಟ್ಟ ಗ್ರಾಮಗಳಿಗೆ ವಿದ್ಯುತ್ ಸಬ್ ಸ್ಟೇಷನ್ ಸ್ಥಾಪನೆ.

1677(2012)

ಶ್ರೀ ಮಲ್ಲಿಕಾರ್ಜುನ ಕೆ.ಬಿ.(ಬೀರೂರು): ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲ್ಲೂಕು ಸಕ್ರೆಪಟ್ಟಣ, ನಾಗೇನಹಳ್ಳಿ ಹಾಗೂ ನಿಡಘಟ್ಟ ಗ್ರಾಮದಲ್ಲಿ ವಿದ್ಯುತ್ (ಎಂ.ಯು.ಎಸ್.ಎಸ್.) ಸಬ್-ಸ್ಟೇಷನ್ ಕೇಂದ್ರವನ್ನು ಸ್ಥಾಪನೆ ಮಾಡುವ ಬಗ್ಗೆ ಅನುಮೋದನೆ ನೀಡಲಾಗಿದೆಯೇ;

ಆ) ನೀಡಲಾಗಿದ್ದಲ್ಲಿ ಈ ಕಾಮಗಾರಿಗೆ ಈ ವರ್ಷದ ಆಯವ್ಯಯದಲ್ಲಿ ಎಷ್ಟೆಷ್ಟು ಹಣವನ್ನು ಕಾದಿರಿಸಲಾಗಿದೆ, ಈ ಕಾಮಗಾರಿಯನ್ನು ಎಂದಿನಿಂದ ಕೈಗೆತ್ತಿಕೊಳ್ಳಲಾಗುವುದು; ಹಾಗೂ ಎಷ್ಟು ಅವಧಿಯಲ್ಲಿ ಪೂರ್ಣಗೊಳಿಸಲಾಗುವುದು.